**OS- 396/2017 P.W.1**

ದಿನಾಂಕಃ29.06.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>**ಪಾಟೀ ಸವಾಲು ಃ**</u> ಪ್ರತಿವಾದಿಯ ಪರ ವಕೀಲರಿಂದ ಃ-

ದಾವಾ ಐಟಂ 3 ನೇ ಆಸ್ತಿಯಲ್ಲಿ 1 ನೇ ಪ್ರತಿವಾದಿಯು ವಾಸವಾಗಿದ್ದಾರೆ ಎಂದರೆ ಸರಿ. ದಾವಾ ಐಟಂ 3 ನೇ ಆಸ್ತಿಯನ್ನು 1 ನೇ ಪ್ರತಿವಾದಿಯ ಭಾಗಕ್ಕೆ ಬಿಟ್ಟು ಕೊಡಲು ತಮಗೆ ತೊಂದರೆ ಇದೆಯಾ ಎಂದರೆ ಸಾಕ್ಷಿಯು ಸಮಾನವಾಗಿ 3 ಭಾಗ ಆಗಬೇಕು ಎಂದು ಸಾಕ್ಷ್ಯ ನುಡಿಯುತ್ತಾರೆ. ದಾವಾ ಐಟಂ 4 ನೇ ಆಸ್ತಿ ಒಟ್ಟು ಕುಟುಂಬದ ಆಸ್ತಿ ಎಂದು ತೋರಿಸಲು ಯಾವುದೇ ದಾಖಲಾತಿ ಸಲ್ಲಿಸಿದ್ದೀರಾ ಎಂದರೆ ಸಾಕ್ಷಿ ನನ್ನ ಬಳಿ ದಾಖಲಾತಿ ಇಲ್ಲ ಎಂದು ನುಡಿಯುತ್ತಾರೆ. ದಾವಾ ಐಟಂ 4 ನೇ ಆಸ್ತಿಗೆ ಸಂಬಂಧಪಟ್ಟಂತೆ ತಾವು 1 ನೇ ಪ್ರತಿವಾದಿಯ ವಿರುದ್ದ ಅಸಲು ದಾವಾ 219/2013 ನ್ನು ಶಾಶ್ವತ ನಿರ್ಬಂಧಕಾಜ್ಞೆ ಕೋರಿ ಇದೇ ನ್ಯಾಯಾಲಯದಲ್ಲಿ ದಾವೆ ಹೂಡಿರುತ್ತೇನೆ ಎಂದರೆ ಸರಿ. ಸದರಿ ದಾವೆ ವಜಾ ಆಗಿರುತ್ತದೆ ಎಂದರೆ ಸರಿಯಲ್ಲ. ಸದರಿ ದಾವೆಯ ತೀರ್ಪು ಮತ್ತು ಡಿಕ್ರಿ ವಿರುದ್ದ ಅಪೀಲು ಸಲ್ಲಿಸಿದ್ದು ಅದು ಆರ್ ಎ 37/2018 ಆಗಿದ್ದು ಅದು ಸಹ ವಜಾ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಐಟಂ 4 ನೇ ಆಸ್ತಿ ಒಟ್ಟು ಕುಟುಂಬದ ಆಸ್ತಿ ಅಲ್ಲ, ಅದು 1 ನೇ ಪ್ರತಿವಾದಿ ಆಸ್ತಿ ಎಂದರೆ ಸರಿಯಲ್ಲ. ತಮ್ಮ ಕುಟುಂಬದ ಆಸ್ತಿಗಳ ಬಗ್ಗೆ ನೋಂದಣಿ ವಿಭಾಗಪತ್ರ ಮಾಡಿಕೊಂಡಿದ್ದು ಅದು ಯಾವಾಗ ಎಂದರೆ ನನಗೆ ಗೊತ್ತಿಲ್ಲ. ದಾವಾ ಐಟಂ 4 ನೇ ಆಸ್ತಿಯಲ್ಲಿ 1 ನೇಪ್ರತಿವಾದಿ ಸ್ವಾಧೀನದಲ್ಲಿ ಇರುವ ಕಾರಣ ಹಲಸೂರು ಗ್ರಾಮ ಪಂಚಾಯಿತಿಯವರು Assessment ನೀಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಐಟಂ 4 ನೇ ಆಸ್ತಿ Assessment ಯಾರ ಹೆಸರಿನಲ್ಲಿ ಇರುತ್ತದೆ ಎಂದು ತಿಳಿದುಕೊಂಡಿದ್ದೀರಾ ಎಂದರೆ ಸಾಕ್ಷಿಯು Assessment ಯಾರ ಹೆಸರಿನಲ್ಲಿಯೂ ಸಹ ಇರುವುದಿಲ್ಲ ಎಂದು ನುಡಿಯುತ್ತಾರೆ. ದಾವಾ ಐಟಂ 4 ನೇ ಆಸ್ತಿ 1 ನೇ ಪ್ರತಿವಾದಿ ಸ್ವಾಧೀನದಲ್ಲಿ ಇರುವ

ವಿಚಾರ ಹಾಗೂ ಅಸಲು ದಾವಾ 219/2013 ರ ಎಲ್ಲಾ ಎಚಾರ ನನಗೆ ಗೊತ್ತಿದ್ದರೂ ಸಹ ನಾನು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪ್ರತಿವಾದ ಪತ್ರದ ಶೆಡ್ಯೂಲ್ ನಲ್ಲಿ ನಮೂದು ಮಾಡಿರುವ ಹಲಸೂರು ಗ್ರಾಮದ ಸರ್ವೇ ನಂಬರ್ 42 ರ 3 ಎಕರೆ 29 ಗುಂಟೆ ಒಟ್ಟು ಕುಟಂಬದ ಸ್ವತ್ತು ಎಂದರೆ ಸರಿಯಲ್ಲ. ನಾನು ಸದರಿ ಜಮೀನಿನ ಕ್ರಯಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಬಲ್ಲೆ. ದಾವಾ ಐಟಂ 4 ನೇ ಆಸ್ತಿಗೆ ಸಂಬಂದಪಟ್ಟಂತೆ ಮಂಡಲ ಪಂಚಾಯಿತಿಯವರು Assessment ಮಾತ್ರ ಮಾಡಿದ್ದು, 1 ನೇ ಪ್ರತಿವಾದಿ ಹಕ್ಕು ಪತ್ರವನ್ನು ಪಡೆದುಕೊಳ್ಳಲು ಪ್ರಯತ್ನ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ. ನಾನು ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆಃ** ಇರುವುದಿಲ್ಲ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇ.

(ಶಿವಕುಮಾರ್ ಆರ್.)
ಸಿ/ಸಿ ಹೆ. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರು,
ತರೀಕೆರೆ.